## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಡಿ.ಎಂ.ಪದ್ಮನಾಭ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಅರಿಶಿನಕುಂಟೆ ಗ್ರಾಮ ಪಂಚಾಯತಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14-ಎ ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

**ಓದಲಾಗಿದೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ.ಕಂಪ್ಲೇಂಟ್/ಉಪಲೋಕ್/ ಬಿಡಿ/3917/2014/ಸನಿಕಾಸ-2 ದಿನಾಂಕ:16-11-2016.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ:19-10-2016 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀ ಎಂ.ಶಂಕರನಾರಾಯಣ ರಾವ್ ಬಿನ್ ಸುಬ್ಬರಾವ್, ಡಿ.ವಿ.ಗುಂಡಪ್ಪ ರಸ್ತೆ, ಅರಕೆರೆ ಬೆಂಗಳೂರು (ದೂರುದಾರರು) ಇವರು ತಮ್ಮ ದೂರಿನಲ್ಲಿ ಶ್ರೀ ಡಿ.ಎಂ. ಪದ್ಮನಾಭ, ಪಂಚಾಯತಿ ಅಭಿವೃಧಿ ಅಧಿಕಾರಿ, ಅರಿಶಿನಕುಂಟೆ ಗ್ರಾಮ ಪಂಚಾಯತಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ (ಎದುರುದಾರರು) ರವರ ವಿರುದ್ಧ ಅವ್ಯವಹಾರದ ಬಗ್ಗೆ ನೀಡಿದ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿರುತ್ತಾರೆ.

ದೂರುದಾರರು ತಮ್ಮ ದೂರಿನಲ್ಲಿ ನೆಲಮಂಗಲ ತಾಲ್ಲೂಕು, ಅರಿಶಿನಕುಂಟೆ ಗ್ರಾಮದ ಜಯಲಕ್ಷ್ಮೀ ಲೇಔಟ್‌ನಲ್ಲಿರುವ ನಿವೇಶನ ಸಂ: 14 ಖಾನೇಷುಮಾರಿ ನಂ.245/14 ಸೈಟನ್ನು ದೂರುದಾರರು ಮೂಲ ನಕ್ಷೆಯ ಪ್ರಕಾರ ಖರೀದಿ ಮಾಡಿರುತ್ತಾರೆ. ಆದರೆ ಲೇಔಟ್‌ನ ಮಾಲೀಕರು ನಂತರ ನಕ್ಷೆ ಬದಲಾಯಿಸಿದ್ದು, ಅದು ದೂರುದಾರರ ಗಮನಕ್ಕೆ ಬಂದಿರುವುದಿಲ್ಲ. ಎದುರುದಾರರು 2011 ರವರೆಗೆ ದೂರುದಾರರಿಂದ ಕಂದಾಯ ಕಟ್ಟಿಸಿಕೊಂಡು ನಂತರ ಕಂದಾಯ ಕಟ್ಟಿಸಿಕೊಂಡಿರುವುದಿಲ್ಲ ಆದ್ದರಿಂದ ಎದುರುದಾರರಿಗೆ ಕಂದಾಯ ಕಟ್ಟಿಸಿಕೊಳ್ಳಲು ಸೂಚಿಸಿ ನ್ಯಾಯ ದೊರಕಿಸಿಕೊಡಬೇಕೆಂದು ಕೇಳಿಕೊಂಡಿದ್ದಾರೆ. ಎದುರುದಾರರಿಗೆ ಆಕ್ಷೇಪಣೆ ಸಲ್ಲಿಸಲು ಸಾಕಷ್ಟು ವೇಳೆ ಹಿಂಬರಹ ನೀಡಿದರೂ ಅವರು ಆಕ್ಷೇಪಣೆ ಸಲ್ಲಿಸಿರುವುದಿಲ್ಲ. ಆದರೆ ಹಿಂಬರಹ ಅವರಿಗೆ ತಲುಪಿದ ಬಗ್ಗೆ ಸ್ವೀಕೃತಿ ಬಂದಿರುತ್ತದೆ. ಆದ್ದರಿಂದ ಎದುರುದಾರರ ಆಕ್ಷೇಪಣೆ ಇಲ್ಲವೆಂದು ಪರಿಗಣಿಸಲಾಗಿದೆ.

ದೂರುದಾರರು ಅರಿಶಿನಕುಂಟೆ ಗ್ರಾಮದ ವ್ಯಾಪ್ತಿಯಲ್ಲಿರುವ ಸ.ನಂ. 54/3 ರಲ್ಲಿ ನಿವೇಶನ ಸಂ:14 ಅನ್ನು ಖಾನೇಷುಮಾರಿ ಸಂ:245/14ರ ನಿವೇಶನವನ್ನು ದಿನಾಂಕ:28-01-1991 ರಂದು ಅದರ ಮಾಲೀಕರಾದ ಶ್ರೀಮತಿ ಜಯಮ್ಮ ರವರಿಂದ ನೋಂದಾಯಿತ ಕ್ರಯ ಪತ್ರದ ಮೂಲಕ ಖರೀದಿಸಿರುತ್ತಾರೆ ಹಾಗೂ ಇದಕ್ಕೆ ಕರ ಪಾವತಿಸಿರುತ್ತಾರೆ. ಈ ಬಗ್ಗೆ ನೊಂದಾಯಿತ ಖರೀದಿ ಪತ್ರ, ಕರ ಪಾವತಿ ಹಾಗೂ ಡಿಮ್ಯಾಂಡ್ ರಿಜಿಸ್ಟರ್ ಹಾಜರು ಪಡಿಸಿದ್ದು, ಇವುಗಳಲ್ಲಿ ದೂರುದಾರರ ಹೆಸರು ದಾಖಲಾಗಿರುತ್ತದೆ. ಆದರೆ ಎದುರುದಾರರು ಏಕಾ ಏಕಿ 2011ರ ನಂತರ ಕರ ಪಾವತಿಸಿಕೊಳ್ಳಲು ನಿರಾಕರಿಸಿರುತ್ತಾರೆಂದೂ ಆಪಾದಿಸಿರುತ್ತಾರೆ. ಆದರೆ ಈ ಬಗ್ಗೆ ಎದುರುದಾರರು ತಮ್ಮ ಆಕ್ಷೇಪಣೆಗಳನ್ನು ಸಲ್ಲಿಸಿರುವುದಿಲ್ಲ ಹೀಗಾಗಿ ದೂರುದಾರರ ಆಪಾದನೆಗಳಿಗೆ ಎದುರುದಾರರ ತಕರಾರು ಇರುವುದಿಲ್ಲವೆಂದು ಪರಿಗಣಿಸಲಾಗಿರುತ್ತದೆ. ಆದ್ದರಿಂದ ಎದುರುದಾರರು ದೂರುದಾರರ ಮನೆಯ ಕರ ಪಾವತಿಸಿಕೊಳ್ಳದೆ ಕರ್ತವ್ಯಲೋಪವೆಸಗಿದ್ದಾರೆಂದು ಮೇಲ್ನೋಟಕ್ಕೆ ಕಂಡುಬರುತ್ತದೆ.

ಶ್ರೀ ಡಿ.ಎಂ.ಪದ್ಮನಾಭ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಅರಿಶಿನಕುಂಟೆ ಗ್ರಾಮ ಪಂಚಾಯತಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರು ಸರ್ಕಾರಿ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡ ದುರ್ವರ್ತನೆ / ದುರ್ನಡತೆ ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ ಸದರಿಯವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1) (i) ರಿಂದ (ii)ರ ಅನ್ವಯ ಶಿಸ್ತು ಕ್ರಮಕ್ಕೆ ಬಾಧ್ಯರಾಗಿದ್ದಾರೆಂದು ತಿಳಿಸುತ್ತಾ ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14-ಎ ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/818/ಗ್ರಾಪಂಕಾ/2016 ಬೆಂಗಳೂರು, ದಿನಾಂಕ:21-03-2017.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಡಿ.ಎಂ.ಪದ್ಮನಾಭ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಅರಿಶಿನಕುಂಟೆ ಗ್ರಾಮ ಪಂಚಾಯತಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ-8ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಟಿ.ವಿ. ಅರುಣ್‌ಕುಮಾರ್)**
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತ ರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು (ಪುಟ-1 ರಿಂದ 13 ರವರೆಗೆ ಮೂಲ ದಾಖಲಾತಿಗಳನ್ನು ಇದರೊಂದಿಗೆ ಲಗತ್ತಿಸಿ ಹಿಂದಿರುಗಿಸಿದೆ).
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ.
5) *ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, (ಸಂಬಂಧಿಸಿದ ನೌಕರರಿಗೆ ಆದೇಶದ ಪ್ರತಿಯನ್ನು ತಲುಪಿಸಿ ಸರ್ಕಾರಕ್ಕೆ ಸ್ವೀಕೃತಿ ನೀಡುವಂತೆ ಕೋರಿದೆ.)
6) ಶ್ರೀ ಡಿ.ಎಂ.ಪದ್ಮನಾಭ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಅರಿಶಿನಕುಂಟೆ ಗ್ರಾಮ ಪಂಚಾಯತಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ.
7) ವೆಬ್‌ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
8) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.